ಕರ್ನಾಟಕ ಸರ್ಕಾರ
(ಕಂದಾಯ ಇಲಾಖೆ)
ಉಪತಹಶೀಲ್ದಾರವರ ನ್ಯಾಯಾಲಯ ನಾಡಕಛೇರಿ ಕೊಟ್ಟೂರು

ಸಂ/ಕಂ/ಹ.ಬ./ನಾಕಕೊ/47/2016-17. ದಿನಾಂಕ:23-08-2016.

| ವಾದಿಗಳು | ಪ್ರತಿವಾದಿಗಳು |
|---|---|
| 1)ಮ್ಯಾದಾರ ಕೊಟ್ರೇಶ ತಂದೆ ಎಂ.ಹನುಮಂತಪ್ಪ<br>2)ಮ್ಯಾದಾರ ಅಂಜಿನಪ್ಪ ತಂದೆ ಎಂ.ಹನುಮಂತಪ್ಪ<br>ಕೊಟ್ಟೂರು ಪಟ್ಟಣ ತಾಲೂಕು | ಕಂದಾಯ ಪರಿವೀಕ್ಷಕರು<br>ಕೊಟ್ಟೂರು |
| ಕೂಡ್ಲಿಗಿ ತಾಲೂಕು ರಾಂಪುರ ಗ್ರಾಮದ ಸನಂ 139/17.ವಿಸ್ತೀರ್ಣ 1-53 ಎಕ್ರೆ ಜಮೀನನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ರಾಂಪುರ ಗ್ರಾಮದ ಸನಂ 139/17.ವಿಸ್ತೀರ್ಣ 1-53 ಎಕ್ರೆ ಜಮೀನನ್ನು ಸದರಿ ತಾಲೂಕು ಕೊಟ್ಟೂರು ಪಟ್ಟಣದ ಮ್ಯಾದಾರ ಕೊಟ್ರೇಶ ತಂದೆ ಎಂ.ಹನುಮಂತಪ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ರಾಂಪುರ ಇವರು ನಮೂನೆ-21 ನೋಟಿಸನ್ನು ದಿನಾಂಕ 19-08-2015. ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಹಾಲಿ ಪಟ್ಟದಾರರಾದ ಮ್ಯಾದಾರ ಹನುಮಂತಪ್ಪ ತಂದೆ ಭೀಮಪ್ಪ ಇವರು ಮರಣ ಹೊಂದಿರುವ ಬಗ್ಗೆ ಮರಣ ಪತ್ರ ಲಗತ್ತಿಸಿಲ್ಲದ ಕಾರಣ ಈ ಪ್ರಕರಣವನ್ನು ಎಂ.ಆರ್.ನಂಬರ್:11/2015-16. ದಿನಾಂಕ 19-09-2015 ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸು ನೀಡಿ ದಿನಾಂಕ 30-08-2016 ರಂದು ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ರಾಂಪುರ ಗ್ರಾಮದ ಸನಂ 139/17.ವಿಸ್ತೀರ್ಣ 1-53 ಎಕ್ರೆ ಜಮೀನು ನಮ್ಮ ತಂದೆಯವರಾದ ಮ್ಯಾದಾರ ಹನುಮಂತಪ್ಪ ತಂದೆ ಭೀಮಪ್ಪ ಇವರ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇರುತ್ತದೆ. ಇವರು ದಿನಾಂಕ 20-11-1994 ರಂದು ಹಾಗೂ ನಮ್ಮ ತಾಯಿಯವರಾದ ಎಂ.ಕೊಟ್ರಮ್ಮ ಗಂಡ ಎಂ.ಹನುಮಂತಪ್ಪ ಇವರು ದಿನಾಂಕ 26-05-2000 ರಂದು ನಿಧನ ಹೊಂದಿರುತ್ತಾರೆ. ಕಾರಣ ಪೋತಿವಾರಸು ಪ್ರಕಾರ ನಮ್ಮಗಳ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಯಾವ ಅರ್ಜಿಯನ್ನು ಸಲ್ಲಿಸಿಲ್ಲವೆಂದು ವಿಚಾರಣೆಯಲ್ಲಿ ತಿಳಿಸಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಹೇಳಿಕೆಗಳನ್ನು ಕೇಳಿ ಅರ್ಜಿದಾರರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಯಾವ ಅರ್ಜಿಯನ್ನು ಸಲ್ಲಿಸಿಲ್ಲವೆಂದು ತಿಳಿಸಿರುವ ಕಾರಣ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

ಪು.ತಿ.ನೋ:-2

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ರಾಂಪುರ **ಗ್ರಾಮದ** ಸನಂ 139/17.ವಿಸ್ತೀರ್ಣ 1-53 ಎಕ್ರೆ ಜಮೀನಿನ ಅರ್ಜಿದಾರರು ಹಕ್ಕು ಬದಲಾವಣೆಗೆ ತಾವು **ಯಾವುದೇ** ಅರ್ಜಿ ಸಲ್ಲಿಸಿಲ್ಲವೆಂದು ತಿಳಿಸಿದ ಕಾರಣ ಅವರ ಅರ್ಜಿಯನ್ನು ತಿರಸ್ಕರಿಸುತ್ತಾ **ಯಥಾಸ್ಥಿತಿಯಂತೆ** ಮುಂದುವರೆಸಲು ಆದೇಶಿಸಿ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ **ಹಂತದಲ್ಲಿ** ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 30-08-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಚೇರಿ ಕೊಟ್ಟೂರು
ಕೊಟ್ಟೂರು

ಇದರ ಪ್ರತಿಯನ್ನು:

1) ಅರ್ಜಿದಾರರಾದ ಮ್ಯಾದಾರ ಕೊಟ್ರೇಶ ತಂದೆ ಲೇಟ್ ಎಂ.ಹನುಮಂತಪ್ಪ. ಮ್ಯಾದಾರ ಅಂಜಿನಪ್ಪ ತಂದೆ ಲೇಟ್ ಎಂ.ಹನುಮಂತಪ್ಪ. ಕೊಟ್ಟೂರು ಪಟ್ಟಣ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ಕಂದಾಯ ಪರಿವೀಕ್ಷಕರು ಕೊಟ್ಟೂರು ಇವರ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.